6, (86) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರೈತರ ಬೆಳೆ ಸಾಲದ ಬಡ್ಡಿಯನ್ನು ಮನ್ನಾ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ದಿನಾಂಕ : 31–03–2004ಕ್ಕೆ ಹೊರಬಾಕಿ ಇರುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲಗಳ ಅಸಲನ್ನು ರೈತರು ದಿನಾಂಕ : 01–03–2005ರಿಂದ ಅವಧಿಯಲ್ಲಿ ಸಂಬಂಧಪಟ್ಟ ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಮರುಪಾವತಿಸಿದಲ್ಲಿ ಸದರಿ ಸಾಲಗಳ ಮೇಲಿನ ಬಡ್ಡಿ ದಂಡದ ಬಡ್ಡಿಯನ್ನು ಮನ್ನಾ ಮಾಡಿ ತತ್ಸಂಬಧವಾದ ಬಡ್ಡಿ, ದಂಡದ ಬಡ್ಡಿ ಮೊಬಲಗನ್ನು ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಭರಿಸಿ ಕೊಡಲು ಮಂಜೂರಾತಿ ನೀಡಲಾಗಿರುತ್ತದೆ.

7, (87) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಇತ್ತೀಚಿನ ಕನ್ನಡ ಚಲನಚಿತ್ರಗಳಿಂದ ಪ್ರದರ್ಶಿಸುವ ಅಶ್ಲೀಲ ದೃಶ್ಯಗಳು ಹಾಗೂ ಹಾಡುಗಳಿಂದ ಯುವ ಸಮೂಹದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ?

ಆ) ಹಾಗಿದ್ದಲ್ಲಿ ಈ ದಿಸೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಬಂದಿರುವುದಿಲ್ಲ.

ಆ) ಈ ವಿಷಯದ ವ್ಯಾಪ್ತಿಯು ಗೃಹ ಮತ್ತು ಕಂದಾಯ ಇಲಾಖೆಯ ಅಧೀನದಲ್ಲಿರುವುದರಿಂದ, ಅಂತಹ ಯಾವುದೇ ಘಟನೆಗಳು ಬಂದಾಗ ಆ ಇಲಾಖೆಗಳು ಸೂಕ್ತ ಕಾನೂನಿನ ಅಡಿಯಲ್ಲಿ ಕ್ರಮ ಜರುಗಿಸಲು ಅವಕಾಶವಿದೆ.

10, (103) ಶ್ರೀ ಹಾಲಪ್ಪ ಹೆಚ್. : ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಯುವಜನ ಮೇಳಗಳಿಗೆ ಸರ್ಕಾರದಿಂದ ನೀಡುವ ಅನುದಾನವೆಷ್ಟು; (ಜಿಲ್ಲಾ ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು)